# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1153

ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 28-12-2022

ಉತ್ತರಿಸುವ ಸಚಿವರು : ಮಾನ್ಯ ಲೋಕೋಪಯೋಗಿ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರಗಳು |
|---|---|---|
| ಅ) | ಬ್ಯಾಕ್‌ಲಾಗ್ ಅಡಿಯಲ್ಲಿ 846 ಅಭಿಯಂತರರನ್ನು ಗುರುತಿಸಿ ಲೋಕೋಪಯೋಗಿ ಇಲಾಖೆಯ ಮುಖಾಂತರ ಭರ್ತಿ ಮಾಡಿದ್ದು, ಅವರುಗಳನ್ನು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಪಿನಂತೆ 3 ಇಲಾಖೆಗಳಿಗೂ ಸರಿಸಮಾನವಾಗಿ ಭರ್ತಿ ಮಾಡಿ ಆಯಾ ಇಲಾಖೆಗೆ ಹಂಚಿಕೆ ಮಾಡದೆ ಇರುವುದು ನಿಜವೇ; (ವಿವರವಾದ ಮಾಹಿತಿ ನೀಡುವುದು) | ಮಾನ್ಯ ಸರ್ವೋಚ್ಚ ನ್ಯಾಯಾಲಯವು ಎಸ್.ಎಲ್.ಪಿ. ಸಂ. 9337-9352/2015ರ ಪ್ರಕರಣದಲ್ಲಿ ನೀಡಿದ ದಿನಾಂಕ: 04.11.2015ರ ಅಂತಿಮ ತೀರ್ಪಿನಲ್ಲಿ ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಿಗೆ ಸಂಬಂಧಿಸಿದಂತೆ ಬ್ಯಾಕ್‌ಲಾಗ್ ಸಹಾಯಕ ಇಂಜಿನಿಯರ್ ಗಳ ನೇಮಕಾತಿಯನ್ನು 2001ರ ವಿಶೇಷ ನಿಯಮಾವಳಿಗಳನುಸಾರ ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆ ಪ್ರಕ್ರಿಯೆ ನಡೆಸಿ, 2016ರಲ್ಲಿ ಆಯೋಗವು ಪ್ರಕಟಿಸಿರುವ ಆಯ್ಕೆಪಟ್ಟಿಯನುಸಾರ ನೇಮಕಾತಿ ಮಾಡಲಾಗಿರುತ್ತದೆ.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದನುಸಾರ ಮೂರು ಇಲಾಖೆಯಲ್ಲಿನ ಹುದ್ದೆಗಳಿಗೆದುರಾಗಿ ನೇಮಕಾತಿ ಮಾಡಲಾಗಿದ್ದು, ನಂತರ ಇಲಾಖೆಗಳ ಬೇರ್ಪಡೆ ಹಿನ್ನಲೆಯಲ್ಲಿ ಶಾಶ್ವತ ವರ್ಗಾವಣೆಗೆ ಅಭಿಮತ ಇಚ್ಛಾಪತ್ರ ಸಲ್ಲಿಸಿರುವಂತೆ ಜಲಸಂಪನ್ಮೂಲ ಇಲಾಖೆಗೆ – 131 ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ -- 36 ಬ್ಯಾಕ್‌ಲಾಗ್ ಸಹಾಯಕ ಇಂಜಿನಿಯರ್‌ಗಳನ್ನು ಹಂಚಿಕೆ ಮಾಡಲಾಗಿರುತ್ತದೆ.<br><br>ಇನ್ನುಳಿದಂತೆ ಬ್ಯಾಕ್‌ಲಾಗ್ ಹುದ್ದೆಗಳಿಗೆದುರಾಗಿ ನೇಮಕಗೊಂಡು ಲೋಕೋಪಯೋಗಿ ಇಲಾಖೆಯಲ್ಲಿ ಹೆಚ್ಚುವರಿಯಾಗಿ ಉಳಿದಿರುವ ಸಹಾಯಕ ಇಂಜಿನಿಯರ್‌ಗಳನ್ನು ಜಲಸಂಪನ್ಮೂಲ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳು ಹಂಚಿಕೆ ಮಾಡಿಕೊಳ್ಳಲು ಕ್ರಮ ವಹಿಸಬೇಕಾಗಿರುತ್ತದೆ. |
| ಆ) | ಈ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಸರಿಯಾಗಿ ಹಂಚಿಕೆ ಮಾಡದೆ ಇರುವುದರಿಂದ ಮುಂಬಡ್ತಿಗೆ ಲೋಕೋಪಯೋಗಿ ಇಲಾಖೆಯ ಇತರೆ ಸಹಾಯಕ ಇಂಜಿನಿಯರ್‌ಗಳ ಮುಂಬಡ್ತಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಮಾನ್ಯ ಸರ್ವೋಚ್ಚ ನ್ಯಾಯಾಲಯವು ಬ್ಯಾಕ್‌ಲಾಗ್ ಇಂಜಿನಿಯರ್‌ಗಳ ನೇಮಕಾತಿಗೆ ಸಂಬಂಧಿಸಿದಂತೆ ನೇಮಕಗೊಂಡ ಅಧಿಕಾರಿಗಳನ್ನು 3 ಇಲಾಖೆಗಳಿಗೆ ಹಂಚಿಕೆ ಮಾಡಲು ಯಾವುದೇ ನಿರ್ದೇಶನ ನೀಡಿರುವುದಿಲ್ಲ. ಆದರೆ ಜೇಷ್ಠತೆಯನ್ನು 2003-2004 ರಿಂದ ಜಾರಿಗೆ ಬರುವಂತೆ ನಿಗಧಿಪಡಿಸುವಂತೆ ನಿರ್ದೇಶಿಸಿದ್ದು, ಅದರನ್ವಯ ಪ್ರಕಟಿಸಿರುವ ಸಹಾಯಕ ಇಂಜಿನಿಯರ್‌ಗಳ ಅಂತಿಮ ಜೇಷ್ಠತಾ ಪಟ್ಟಿಯನುಸಾರ ಅರ್ಹ ಸಹಾಯಕ ಇಂಜಿನಿಯರ್‌ಗಳಿಗೆ ಕಾಲಕಾಲಕ್ಕೆ ಲಭ್ಯವಾಗುವ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ವೃಂದದ ಖಾಲಿ ಹುದ್ದೆಗಳಿಗೆ ಪದೋನ್ನತಿ ನೀಡಲು ಪರಿಗಣಿಸಲಾಗುತ್ತಿದೆ. |

| | | |
|---|---|---|
| ಇ) | ಬಂದಿದಲ್ಲಿ, ಲೋಕೋಪಯೋಗಿ ಇಲಾಖೆಯ ಸಹಾಯಕ ಅಭಿಯಂತರರ ಮುಂಬಡ್ತಿಯನ್ನು ಯಾವ ಕಾಲಮಿತಿಯೊಳಗೆ ನೀಡಲು ಕ್ರಮಕೈಗೊಳ್ಳಲಾಗುವುದು. | ಸಹಾಯಕ ಕಾರ್ಯಪಾಲಕ ಇಂಜಿನಿಯರ್ ವೃಂದದ ಖಾಲಿ ಹುದ್ದೆಗಳನ್ನು ಪರಿಗಣಿಸಿ ಅರ್ಹ ಸಹಾಯಕ ಇಂಜಿನಿಯರ್‌ಗಳಿಗೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ಕಾಲಕಾಲಕ್ಕೆ ಪದೋನ್ನತಿ ನೀಡಲು ಕ್ರಮವಹಿಸಲಾಗುತ್ತಿದೆ. |
| ಈ) | ಪ್ರಸ್ತುತ ಸಾಲಿನಲ್ಲಿ ಕೆ.ಪಿಎಸ್.ಸಿ ವತಿಯಿಂದ ಸಹಾಯಕ ಅಭಿಯಂತರರು ಮತ್ತು ಕಿರಿಯ ಅಭಿಯಂತರರುಗಳ ನೇಮಕಾತಿ ಯಾವ ಹಂತದಲ್ಲಿದೆ: ಅವುಗಳ ಸಂಖ್ಯೆ ಎಷ್ಟು? (ಸಂಪೂರ್ಣವಾದ ಮಾಹಿತಿ ಒದಗಿಸುವುದು) | ಪ್ರಸ್ತುತ ಲೋಕೋಪಯೋಗಿ ಇಲಾಖೆಯಲ್ಲಿನ ಸಹಾಯಕ ಇಂಜಿನಿಯರ್ ವೃಂದದ 660 ಮತ್ತು ಕಿರಿಯ ಇಂಜಿನಿಯರ್ ವೃಂದದ 325 ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಕುರಿತು ಕರ್ನಾಟಕ ಲೋಕಸೇವಾ ಆಯೋಗವು ಇತ್ತೀಚೆಗೆ ಅರ್ಹ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ತಯಾರಿಸುತ್ತಿದ್ದು, ಆಯೋಗದಿಂದ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿ ಪ್ರಕಟಗೊಂಡ ತಕ್ಷಣ ನಿಯಮಾನುಸಾರ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು. |

ಸಂಖ್ಯೆ: ಲೋಇ 244 ಎಸ್‌ಎಸ್‌ಕೆ 2022

**(ಸಿ.ಸಿ.ಪಾಟೀಲ್)**
ಲೋಕೋಪಯೋಗಿ ಸಚಿವರು